# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 1939(2320) |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 21/03/2022 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಪ್ರಶ್ನೆ | ಉತ್ತರ |
|---|---|
| ಅ) ದೈಹಿಕ ಶಿಕ್ಷಣ ಉನ್ನತೀಕರಣ ಸಂಬಂಧ ದೈಹಿಕ ಶಿಕ್ಷಕರ ನೇಮಕಾತಿ ಮತ್ತು ಬಡ್ತಿ ಸಲುವಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸುಮಾರು 15 ವರ್ಷಗಳಿಂದ ತಿದ್ದುಪಡಿ ಮಾಡದಿರಲು ಕಾರಣಗಳೇನು; (ವಿವರ ನೀಡುವುದು)<br><br>ಆ) ಯಾವ ಕಾಲಮಿತಿಯಲ್ಲಿ ತಿದ್ದುಪಡಿ ಮಾಡಲಾಗುವುದು; | ಸರ್ಕಾರದ ಆದೇಶ ಸಂಖ್ಯೆ:ಇಡಿ 290 ಎಸ್‌ಎಲ್‌ಬಿ 2006, ದಿ:06/08/2007ರಲ್ಲಿ ಪ್ರೋ:ವೈದ್ಯನಾಥನ್ ವರದಿಗೆ ಅನುಮೋದನೆ ನೀಡಿದ್ದು, ಸದರಿ ವರದಿಯಲ್ಲಿನ 14 ಅಂಶಗಳ ಪೈಕಿ 13 ಅಂಶಗಳನ್ನು ಜಾರಿಗೊಳಿಸಲಾಗಿದ್ದು, ಉಳಿದ 14ನೇ ಅಂಶವಾದ ದೈಹಿಕ ಶಿಕ್ಷಣ ಶಿಕ್ಷಕರುಗಳ ಪದನಾಮವನ್ನು "ಸಹ ಶಿಕ್ಷಕರು" (ದೈಹಿಕ ಶಿಕ್ಷಣ) ಎಂದು ಪರಿಗಣಿಸಲು ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಣೆ ಮಾಡುವ ಬಗ್ಗೆ ಇಲಾಖಾ ಮುಖ್ಯಸ್ಥರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.<br><br>ಈ ಬಗ್ಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:24/05/2018ರಂದು ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:23/10/2018ರಂದು ನಡೆದ ವೃಂದ ಪರಿಶೀಲನಾ ಸಮಿತಿ ಸಭೆಯಲ್ಲಿ ಕರಡು ನಿಯಮಗಳಲ್ಲಿ ಕೆಲವೊಂದು ಅಂಶಗಳನ್ನು ಸೇರ್ಪಡೆಗೊಳಿಸಲು ಹಾಗೂ ಕೆಲವು ಅಂಶಗಳನ್ನು ಕೈಬಿಡಲು ನಿರ್ಣಯಿಸಿ, ಕರಡು ತಿದ್ದುಪಡಿ ನಿಯಮಗಳನ್ನು ಅನುಮೋದಿಸಿರುತ್ತಾರೆ.<br><br>ಸಾರ್ವಜನಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣಾ ತಿದ್ದುಪಡಿ ನಿಯಮಗಳ ಕುರಿತಂತೆ ಆರ್ಥಿಕ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹಾಗೂ ಸಂಸದೀಯ ವ್ಯವಹಾರಗಳ ಇಲಾಖೆಗಳೊಂದಿಗೆ ಸಮಾಲೋಚಿಸಲಾಗಿದ್ದು, ಆರ್ಥಿಕ ಇಲಾಖೆಯು ಕೆಲವು ಮಾಹಿತಿ ಒದಗಿಸುವಂತೆ ಕೋರಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಗಳು ಕೆಲವು ಅಂಶಗಳ ಬಗ್ಗೆ ಸಲಹೆ / ಅಭಿಪ್ರಾಯ ನೀಡಿವೆ.<br><br>ಈ ಕುರಿತಂತೆ ದಿ:17/06/2020ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ |

<table>
<tr>
<td></td>
<td>ಇಲಾಖೆ ರವರ ಅಧ್ಯಕ್ಷತೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರು ಮತ್ತು ಇತರೆ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದೆ. ಸದರಿ ಸಭೆಯಲ್ಲಿ, ಆರ್ಥಿಕ ಇಲಾಖೆಯು ಕೋರಿರುವ ಮಾಹಿತಿಯನ್ನು ಒದಗಿಸಲು ಮತ್ತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ನೀಡಿರುವ ಸಲಹೆಗಳನ್ನು ಅಳವಡಿಸಿಕೊಂಡು ಪರಿಷ್ಕೃತ ಕರಡು ನಿಯಮಗಳನ್ನು ಸಿದ್ಧಪಡಿಸಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಯ ಪರಿಶೋಧನೆಗೆ ಕಳುಹಿಸಲು ನಿರ್ಣಯಿಸಲಾಗಿದೆ. ಅದರಂತೆ, ಆರ್ಥಿಕ ಇಲಾಖೆಯು ಕೋರಿರುವ ಮಾಹಿತಿಯನ್ನು ಒದಗಿಸಿ, ಅಭಿಪ್ರಾಯ / ಸಹಮತಿಗಾಗಿ ಕಡತವನ್ನು ದಿ:16/02/2021ರಂದು ಶಿಕ್ಷಣ ಇಲಾಖೆಯಿಂದ ಆರ್ಥಿಕ ಇಲಾಖೆಗೆ ಕಳುಹಿಸಲಾಗಿದ್ದು, ಆರ್ಥಿಕ ಇಲಾಖೆಯಿಂದ, "ಸಾರ್ವಜನಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುವ ವಿಷಯಕ್ಕೆ ಭಾಗ-1ರ ಕ್ರಮ ಸಂಖ್ಯೆ:8ರಲ್ಲಿನ ಪ್ರೌಢ ಶಾಲೆಯ ಮುಖ್ಯ ಶಿಕ್ಷಕರು / ಶಿಕ್ಷಕಿಯರು 88 ಹುದ್ದೆ ಮತ್ತು 304 ಹುದ್ದೆಗಳು ಹಾಗೂ ಭಾಗ-2ರಲ್ಲಿನ ಕ್ರಮ ಸಂಖ್ಯೆ:23 ಪ್ರೌಢ ಶಾಲಾ ಸಹ ಶಿಕ್ಷಕ / ಶಿಕ್ಷಕರ ಗ್ರೇಡ್-2ರ 1520 ಹುದ್ದೆಗಳು ಹಾಗೂ ಕ್ರಮ ಸಂಖ್ಯೆ:33ರ ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-1ರ 304 ಹುದ್ದೆಗಳು ಮತ್ತು ಭಾಗ-4ರ ಕ್ರಮ ಸಂಖ್ಯೆ:49ರ ಲೆಕ್ಕ ಅಧೀಕ್ಷಕರು 34 ಹುದ್ದೆಗಳಿಗೆ ಸಂಬಂಧಿಸಿದಂತೆ, ಮಾಹಿತಿ / ಸ್ಪಷ್ಟೀಕರಣವನ್ನು ದಾಖಲೆಗಳೊಂದಿಗೆ ಒದಗಿಸುವಂತೆ ಮತ್ತು ಈ ಬಗ್ಗೆ ಆರ್ಥಿಕ ಇಲಾಖೆಯನ್ನು ಸಂಪರ್ಕಿಸುವಂತೆ ತಿಳಿಸಿ ದಿನಾಂಕ:18/08/2021ರಂದು ಕಡತ ಹಿಂದಿರುಗಿಸಿರುತ್ತಾರೆ.<br><br>ಈ ಸಂಬಂಧ ಮಾಹಿತಿ ಕ್ರೋಢೀಕರಿಸಲಾಗುತ್ತಿದ್ದು, ನಂತರ ಆರ್ಥಿಕ ಇಲಾಖೆಯಿಂದ ಕೋರಿರುವ ಮಾಹಿತಿಯನ್ನು ನೀಡಿ, ಆರ್ಥಿಕ ಇಲಾಖೆಯ ಸಹಮತಿ / ಅಭಿಪ್ರಾಯ ಪಡೆದು, ಅವುಗಳನ್ನು ಪರಿಷ್ಕೃತ ಕರಡು ನಿಯಮದಲ್ಲಿ ಅಳವಡಿಸಿಕೊಂಡು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಗೆ ಕಳುಹಿಸಲು ಕ್ರಮವಹಿಸಲಾಗುವುದು. ತದನಂತರ ಅಂತಿಮವಾಗಿ ಸಚಿವ ಸಂಪುಟ ಅನುಮೋದನೆ ಪಡೆದು ಕರಡು ನಿಯಮಗಳನ್ನು ಪ್ರಕಟಿಸಿ ನಿಯಮಾನುಸಾರ ಅಂತಿಮಗೊಳಿಸಲಾಗುವುದು.</td>
</tr>
<tr>
<td>ಇ) ಸರ್ಕಾರಿ ಪ್ರೌಢ ಶಾಲೆ, ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಹಾಗೂ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಹಾಗೂ ಈ ಹುದ್ದೆಗಳು ಯಾವ ಸಾಲಿನಿಂದ ಖಾಲಿ ಇವೆ;</td>
<td>
<table>
<tr><th>ಹುದ್ದೆಯ ಹೆಸರು</th><th>ಖಾಲಿ ಇರುವ ಹುದ್ದೆಗಳ ಸಂಖ್ಯೆ</th><th>ಈ ಹುದ್ದೆಗಳು ಯಾವ ಸಾಲಿನಿಂದ ಖಾಲಿ ಇವೆ</th></tr>
<tr><td>ದೈಹಿಕ ಶಿಕ್ಷಣ ಶಿಕ್ಷಕರು (ಸರ್ಕಾರಿ ಪ್ರೌಢ ಶಾಲೆಗಳಲ್ಲಿ)</td><td>910</td><td>2015-16ನೇ ಸಾಲಿನಿಂದ</td></tr>
</table>
</td>
</tr>
</table>

| | | | | |
|---|---|---|---|---|
| | ದೈಹಿಕ ಶಿಕ್ಷಣ ಉಪನ್ಯಾಸಕರು(ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ) | 20 | 15 ಹುದ್ದೆಗಳು 2008ರಿಂದ ಹಾಗೂ 05 ಹುದ್ದೆಗಳು 2013ರಿಂದ ಖಾಲಿ ಇರುತ್ತವೆ. | |

| | |
|---|---|
| ಈ) ಸದರಿ ಹುದ್ದೆಗಳನ್ನು ದೀರ್ಘಕಾಲದಿಂದ ನೇಮಕಾತಿ ಮಾಡದಿರಲು ಕಾರಣಗಳೇನು; | ದೈಹಿಕ ಶಿಕ್ಷಣ ಶಿಕ್ಷಕರ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಆಯುಕ್ತರಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ರಾಜ್ಯದಲ್ಲಿ ದಿ:20/06/2020ರಿಂದ ಆರ್ಥಿಕ ಮಿತವ್ಯಯ ಜಾರಿಯಲ್ಲಿರುವುದರಿಂದ ಸದರಿ ಹುದ್ದೆಗಳನ್ನು ಸಧ್ಯಕ್ಕೆ ಭರ್ತಿ ಮಾಡಲು ಸಾಧ್ಯವಾಗುತ್ತಿಲ್ಲ.<br><br>ಸರ್ಕಾರದ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ 20 ಹುದ್ದೆಗಳ ಪೈಕಿ 10 ಹುದ್ದೆಗಳನ್ನು ನೇರ ನೇಮಕಾತಿಯಡಿ ಭರ್ತಿಗಾಗಿ ದಿನಾಂಕ:20/11/2017ರಂದು ಸಹಮತಿ ನೀಡಲಾಗಿದ್ದು, ಅದರನ್ವಯ ನೇಮಕಾತಿ ಪ್ರಕ್ರಿಯೆ ಕೈಗೊಳ್ಳುವಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ದಿನಾಂಕ:18/11/2021ರಂದು ಕೋರಲಾಗಿರುತ್ತದೆ.<br><br>ಉಳಿದ 10 ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡಲು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರನ್ನು ಕೋರಿ ದಿ:07/07/2021ರಂದು ಮತ್ತು 18/11/2021ರಂದು ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರು ಪತ್ರ ಬರೆದಿರುತ್ತಾರೆ. ಅದರಂತೆ, ದೈಹಿಕ ಶಿಕ್ಷಣ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದ ಸಾರ್ವಜನಿಕ ಶಿಕ್ಷಣ ಇಲಾಖೆಯ ಪ್ರೌಢ ಶಾಲಾ ಅರ್ಹ ಗ್ರೇಡ್-1 ದೈಹಿಕ ಶಿಕ್ಷಕರುಗಳ ವ್ಯಕ್ತಿ ಪೂರ್ವೋತ್ತರ ದಸ್ತಾವೇಜುಗಳನ್ನು ಪಡೆಯಲು ಕ್ರಮವಹಿಸುತ್ತಿದ್ದು, ಶೀಘ್ರದಲ್ಲೇ ಬಡ್ತಿ ನೀಡಲು ಕ್ರಮಕೈಗೊಳ್ಳಲಾಗುವುದು. |
| ಉ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು? | |

ಸಂಖ್ಯೆ:ಇಪಿ 32 ಡಿಎಆರ್ 2022

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು